# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ಗುರುತಿನ ಪ್ರಶ್ನೆ

ದಿನಾಂಕ : 31-03-2021 ಪ್ರಶ್ನೆ ಸಂಖ್ಯೆ : 359 (2517)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು )

ಉತ್ತರ ನೀಡಬೇಕಾದ ದಿನಾಂಕ : 31-03-2021

ಉತ್ತರಿಸುವ ಸಚಿವರು : ಕಂದಾಯ ಸಚಿವರು

ವಿಷಯ : ರೈತರಿಗೆ ಗುತ್ತಿಗೆ/ಖಾಯಂ ಭೂಮಾಪಕರಿಂದ ತೊಂದರೆಯಾಗುತ್ತಿರುವ ಬಗ್ಗೆ

(ಅ) ಬೀದರ್ ಜಿಲ್ಲೆಯಲ್ಲಿ ಕಂದಾಯ ಇಲಾಖೆಯಡಿ ಕರ್ತವ್ಯ ನಿರ್ವಹಿಸುತ್ತಿರುವ ಒಟ್ಟು ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಖಾಯಂ ಹಾಗೂ ಗುತ್ತಿಗೆ ಸಿಬ್ಬಂದಿಗಳ ವಿವರವನ್ನು ಹೆಸರು ಹಾಗೂ ಅವರು ಸೇವೆಗೆ ಸೇರಿದ ದಿನಾಂಕದ ಮಾಹಿತಿಯೊಂದಿಗೆ ನೀಡುವುದು)

(ಆ) ಪರವಾನಗಿ ಭೂಮಾಪಕರನ್ನು ನೇಮಕ ಮಾಡಿಕೊಳ್ಳಲು ಅಗತ್ಯ ಅನುಮತಿ ಪಡೆಯಲಾಗಿದೆಯೇ ಇವರಿಗೆ ಪಾವತಿಸುತ್ತಿರುವ ವೇತನ ಎಷ್ಟು ; ಇವರಿಗೆ ಹಂಚಿಕೆ ಮಾಡಿರುವ ಕಾರ್ಯವನ್ನು ಸಮರ್ಪಕವಾಗಿ ನಿಭಾಯಿಸುತ್ತಿದ್ದಾರೆಯೇ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಖಾಯಂ ಭೂಮಾಪಕರು ಇದ್ದರೂ ಸಹ ಪರವಾನಗಿ ಗುತ್ತಿಗೆ ಭೂಮಾಪಕರಿಂದ ಭೂಮಿ ಸರ್ವೆ ಇತ್ಯಾದಿ ಕೆಲಸಗಳನ್ನು ನಿರ್ವಹಿಸಲು, ಭೂದಾಖಲೆಗಳ ಸಹಾಯಕ ನಿರ್ದೇಶಕರು ಸೂಚಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕಾರಣಗಳೇನು; (ವಿವರ ನೀಡುವುದು)

(ಈ) ಭೂದಾಖಲೆಗಳ ಸಹಾಯಕ ನಿರ್ದೇಶಕರು ಪರವಾನಗಿ/ಭೂಮಾಪಕರಿಗೆ ಹೆಚ್ಚೆಚ್ಚು ಕೆಲಸಗಳನ್ನು ನೀಡಲು ಹಣ ಪಡೆಯುತ್ತಿರುವ ಆರೋಪಗಳಿದ್ದು, ಇಂತಹ ಅಧಿಕಾರಿಗಳ ಮೇಲೆ ಕೈಗೊಂಡಿರುವ ಕ್ರಮಗಳೇನು; (ಮಾಹಿತಿ ನೀಡುವುದು)

(ಉ) ಪರವಾನಗಿ/ಖಾಯಂ ಭೂಮಾಪಕರು ಹಣ ನೀಡದ ಜಮೀನಿನ ಸರ್ವೆ ಕಾರ್ಯ ಮಾಡಲು ನಿರಾಕರಿಸುತ್ತಿರುವುದು ನಿಜವೇ; ಅಂತಹ ಗುತ್ತಿಗೆ/ಪರವಾನಗಿ ಭೂಮಾಪಕರನ್ನು ಕೆಲಸದಿಂದ ವಜಾ ಮಾಡುವ ಬಗ್ಗೆ ಸರ್ಕಾರದ ನಿಲುವೇನು; ಪರವಾನಗಿ ಭೂಮಾಪಕರಿಂದ ರೈತರಿಗೆ ತುಂಬಾ ತೊಂದರೆಯಾಗುತ್ತಿದ್ದು, ಅದನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)